ಸಿಬ್ಬಂದಿ ಕೊರತೆ

5315 (5968); ಶ್ರೀ ದತ್ತಾತ್ರೇಯ ಸಿ. ಪಾಟೀಲ್ ರೇವೂರ (ಗುಲ್ಬರ್ಗಾ ದಕ್ಷಿಣ)

ಅ) ಕಲಬುರಗಿ ದಕ್ಷಿಣ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮಹಾನಗರ ಪಾಲಿಕೆಯಲ್ಲಿ ಅವಶ್ಯಕತೆ ಇರುವ ಸಿಬ್ಬಂದಿ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಅವಶ್ಯಕ ಸಿಬ್ಬಂದಿ ನೇಮಿಸಲು ಸರಕಾರ ಕೈಗೊಂಡ ಕ್ರಮವೇನು;

ಇ) ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ವರ್ಗವಾರು ವಿವರಗಳನ್ನು ನೀಡುವುದು);

ಶ್ರೀ ವಿನಯ ಕುಮಾರ ಸೊರಕೆ (ನಗರಾಭಿವೃದ್ಧಿ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) 2011 ರ ಮಹಾನಗರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳಡಿಯಲ್ಲಿ ಕಲಬುರಗಿ ಮಹಾನಗರ ಪಾಲಿಕೆಗೆ ಮಂಜೂರಾದ ನೇರ ನೇಮಕಾತಿ ಕೋಟಾದಡಿಯಲಿ ಅವಶ್ಯವಿರುವ 'ಬಿ' ಹಾಗೂ 'ಸಿ' ವೃಂದದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ದಿನಾಂಕ: 15.10.2015ರಂದು ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಾಗೂ 'ಡಿ' ದರ್ಜೆಯ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಂತೆ ದಿನಾಂಕ: 10.08.2015 ಹಾಗೂ 10.09.2015 ರಲ್ಲಿ ಜಿಲ್ಲಾಧಿಕಾರಿಗಳು ಕಲಬುರಗಿ ಜಿಲ್ಲೆ ರವರಿಗೆ ಪತ್ರ ಬರೆಯಲಾಗಿದೆ. (ಪ್ರತಿ ಲಗತ್ತಿಸಿದೆ).

ಇ) 2011ರ ಮಹಾನಗರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಕಲಬುರಗಿ ಮಹಾನಗರಪಾಲಿಕೆಗೆ

ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಹುದ್ದೆಗಳ ವಿವರಗಳನ್ನು ಈ ಕೆಳಕಂಡಂತೆ ವರ್ಗವಾರು ನೀಡಿದೆ.

ವೃಂದ	ಮಂಜೂರಾದ ಹುದ್ದೆಗಳ ಸಂಖ್ಯೆ	ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ	ಖಾಲಿ ಇರುವ ಹುದ್ದೆಗಳ ಸಂಖ್ಯೆ
ಗ್ರೂಪ್ 'ಎ'	31	05	26
ಗ್ರೂಪ್ 'ಬಿ'	32	14	18
ಗ್ರೂಪ್ 'ಸಿ'	575	134	441
ಗ್ರೂಪ್ 'ಡಿ'	1087	291	796
ಒಟ್ಟು	**1725**	**444**	**1281**

ಕೃಷಿ ಉಪಕರಣಗಳನ್ನು ಬಾಡಿಗೆಗೆ ನೀಡುವುದು

5317 (5736); ಡಾ॥ ಅಜಯ್ ಸಂಗ್ (ಜೇವರ್ಗಿ)

ಅ) ಕಲಬುರಗಿ ಜಿಲ್ಲೆಯಲ್ಲಿ ಬಾಡಿಗೆ ಆಧಾರದ ಮೇಲೆ ರೈತರಿಗೆ ಕೃಷಿ ಉಪಕರಣಗಳನ್ನು ನೀಡಲು ಮಂಜೂರಾದ ಕೇಂದ್ರಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

ಆ) ಜೇವರ್ಗಿ ತಾಲ್ಲೂಕಿನಲ್ಲಿ ಯಾವ ಯಾವ ಉಪಕರಣಗಳನ್ನು ಒದಗಿಸಲಾಗಿದೆ;

ಇ) ಯಾವ ಆಧಾರದ ಮೇಲೆ ಬಾಡಿಗೆ ನಿಗದಿಪಡಿಸಲಾಗಿದೆ; ಇದರ ಮಾನದಂಡವೇನು;